## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀಮತಿ ರವಿಜಾ ಎಸ್ ರಾವ್, ಸದಸ್ಯರು ಮತ್ತು ಶ್ರೀಮತಿ ಪುಷ್ಪಾ, ಸದಸ್ಯರು, ಧರ್ಮಸ್ಥಳ ಗ್ರಾಮ ಪಂಚಾಯಿತಿ, ಬೆಳ್ತಂಗಡಿ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ, ಇವರುಗಳು ಸತತವಾಗಿ ನಾಲ್ಕು ಸಭೆಗಳಿಗೆ ಗೈರು ಹಾಜರಾಗಿರುವ ಬಗ್ಗೆ ಇವರುಗಳ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ರನ್ವಯ ಕ್ರಮ ಜರುಗಿಸುವ ಬಗ್ಗೆ.

ಓದಲಾಗಿದೆ:

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ದಕ್ಷಿಣ ಕನ್ನಡ ಜಿಲ್ಲೆ, ಇವರ ಪತ್ರ ಸಂಖ್ಯೆ: ದಕಜಿಪ:ಗ್ರಾಪಂ:ಸಿಆರ್:12/2017-18(ಸಿ2), ದಿನಾಂಕ:04-12-2017.
2) ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ:ಗ್ರಾಅಪ 793 ಗ್ರಾಪಂಅ 2017, ದಿನಾಂಕ: 28.12.2017.
3) ಶ್ರೀಮತಿ ರವಿಜಾ ಎಸ್.ರಾವ್, ಸದಸ್ಯರು ಇವರ ಲಿಖಿತ ಹೇಳಿಕೆ ದಿನಾಂಕ:26.01.2018.
4) ಸರ್ಕಾರದ ಸಮಸಂಖ್ಯೆಯ ವಿಚಾರಣಾ ನೋಟೀಸ್, ದಿನಾಂಕ:26.02.2018, 14.06.2018, 17.11.2018 ಮತ್ತು 04.12.2018.

ಪ್ರಸ್ತಾವನೆ:

ಮೇಲೆ ಓದಲಾದ (1) ರಲ್ಲಿ ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲ್ಲೂಕು, ಧರ್ಮಸ್ಥಳ ಗ್ರಾಮ ಪಂಚಾಯತ್ ಸದಸ್ಯರುಗಳಾದ ಶ್ರೀಮತಿ ಪುಷ್ಪಾ ಮತ್ತು ಶ್ರೀಮತಿ ರವಿಜಾ ಎಸ್. ರಾವ್ ಇವರು ಸತತವಾಗಿ ಗ್ರಾಮ ಪಂಚಾಯಿತಿಯ ನಾಲ್ಕು ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿರುತ್ತಾರೆ. ಆದುದರಿಂದ ಸದರಿ ಸದಸ್ಯರುಗಳ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ)(1)(iii)ರನ್ವಯ ಕ್ರಮಜರುಗಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದರು.

ಮೇಲೆ ಓದಲಾದ (2)ರಲ್ಲಿ ಶ್ರೀಮತಿ ರವಿಜಾ ಎಸ್ ರಾವ್, ಸದಸ್ಯರು ಮತ್ತು ಶ್ರೀಮತಿ ಪುಷ್ಪಾ, ಸದಸ್ಯರು, ಧರ್ಮಸ್ಥಳ ಗ್ರಾಮ ಪಂಚಾಯಿತಿ, ಬೆಳ್ತಂಗಡಿ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ, ಇವರುಗಳಿಗೆ ಸರ್ಕಾರದಿಂದ ಕಾರಣ ಕೇಳುವ ನೋಟೀಸು ಜಾರಿ ಮಾಡಿ, ತಮ್ಮ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಆಪಾದಿತ ಸದಸ್ಯರು ಸಮಜಾಯಿಷಿಯನ್ನು ಸಲ್ಲಿಸುವಂತೆ ತಿಳಸಲಾಗಿತ್ತು.

ಶ್ರೀಮತಿ ಪುಷ್ಪಾರವರು ಸರ್ಕಾರದ ಕಾರಣ ಕೇಳುವ ನೋಟೀಸಿಗೆ ತಮ್ಮ ಲಿಖಿತ ಸಮಜಾಯಿಷಿ ಸಲ್ಲಿಸಿರುವುದಿಲ್ಲ.

ಮೇಲೆ ಓದಲಾದ (3)ರಲ್ಲಿ ಸರ್ಕಾರದ ಕಾರಣ ಕೇಳುವ ನೋಟೀಸಿಗೆ ಶ್ರೀಮತಿ ರವಿಜಾ ಎಸ್.ರಾವ್‌ರವರು ದಿನಾಂಕ:29.01.2018ರಂದು ಲಿಖಿತ ಹೇಳಿಕೆ ಸಲ್ಲಿಸಿದ್ದು, ಅದರಲ್ಲಿನ ಪ್ರಮುಖ ಅಂಶಗಳು ಈ ಕೆಳಕಂಡಂತಿವೆ-

- ದಿನಾಂಕ:05.07.2017ರಂದು ನಡೆದ ಸಾಮಾನ್ಯಸಭೆಗೆ ತಾವು ಹಾಜರಾಗಿರುವುದಾಗಿ, ತಮ್ಮ ಹಾಜರಾತಿಯ ಬಗ್ಗೆ ಸಹಿತೆಗೆದುಕೊಳ್ಳಲಿಲ್ಲ.

* ದಿನಾಂಕ:24.09.2016, 25.10.2016 ಹಾಗೂ 18.11.2016ರ ಸಭೆಗೆ ಅನಾರೋಗ್ಯದ ಕಾರಣ ಹಾಜರಾಗಲು ಸಾಧ್ಯವಾಗಲಿಲ್ಲ ಹಾಗೂ ತಾವು ಸ್ತ್ರೀ ಸಂಬಂಧಿ ಕಾಯಿಲೆಯಿಂದ ದಿನಾಂಕ:10.10.2016ರಿಂದ 25.11.2016ರವರೆಗೆ ಬಳಲುತ್ತಿದ್ದು, ಚಿಕಿತ್ಸೆ ಪಡೆದಿರುವ ಬಗ್ಗೆ ವೈದ್ಯಕೀಯ ಪ್ರಮಾಣ ಪತ್ರ ಸಲ್ಲಿಸಿರುತ್ತಾರೆ.
* ದಿನಾಂಕ:18.11.2016ರ ಸಭೆಗೆ ಹಾಜರಾಗಲು ಸಾಧ್ಯವಿಲ್ಲದಿರುವ ಬಗ್ಗೆ ಪಿ.ಡಿ.ಓ ಬಗ್ಗೆ ಪೋನ್ ಮುಖಾಂತರ ತಿಳಿಸಿದ್ದೇನೆ.
* ನಂತರ ದಿನಾಂಕ:29.12.2016 ರಂದು ನಡೆದ ಸಭೆಗೆ ನಿರಂತರವಾಗಿ 7 ಸಾಮಾನ್ಯಸಭೆಗೆ ಭಾಗವಹಿಸಿ ಅಭಿವೃದ್ಧಿಯ ಕಾರ್ಯದಲ್ಲಿ ಸಹಕರಿಸಿದ್ದೇನೆ.
* ನಂತರದ ದಿನಗಳಲ್ಲಿ ಸಾಮಾನ್ಯಸಭೆಗೆ ಹಾಜರಾಗಲು ತಮಗೆ ನೋಟೀಸ್ ಜಾರಿ ಮಾಡಿರುವುದಿಲ್ಲ ಎಂದು ತಿಳಿಸಿರುತ್ತಾರೆ.

ತಾವು ತಮ್ಮ ಭಾಗದ ಜನರಿಗೆ ಪ್ರಾಮಾಣಿಕ ಸೇವೆ ಸಲ್ಲಿಸುವ ಉದ್ದೇಶದಿಂದ ಆ ಭಾಗದ ಮತದಾರರ ಮತದಿಂದ ಆಯ್ಕೆ ಆಗಿದ್ದೇನೆ. ಹಾಗಾಗಿ ತಮ್ಮ ಭಾಗದ ಜನರ ಸೇವೆ ಮಾಡಲು ಅವಕಾಶವನ್ನು ನೀಡಬೇಕಾಗಿ ನೀಡಬೇಕು ಹಾಗೂ ತಮ್ಮ ಸದಸ್ಯತ್ವವನ್ನು ಊರ್ಜಿತಗೊಳಿಸಬೇಕಾಗಿ ಕೋರಿರುತ್ತಾರೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮಾನ್ಯ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)ರವರ ನ್ಯಾಯಾಲಯದಲ್ಲಿ ದಿನಾಂಕ:07.12.2018ರಂದು ವಿಚಾರಣೆ ನಡೆಸಲಾಯಿತು. ಸದರಿ ವಿಚಾರಣೆಗೆ ಆಪಾದಿತ ಸದಸ್ಯರಾದ ಶ್ರೀಮತಿ ಪುಷ್ಪಾರವರು ಗೈರುಹಾಜರಾಗಿರುತ್ತಾರೆ. ಮತ್ತೊಬ್ಬ ಆಪಾದಿತ ಸದಸ್ಯರಾದ ಶ್ರೀಮತಿ ರವಿಜಾ ಎಸ್.ರಾವ್, ಶ್ರೀ ಸಚಿನ್‌ಕುಮಾರ್, ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್ ದಕ್ಷಿಣ ಕನ್ನಡ, ಶ್ರೀಮತಿ ಸುವರ್ಣ ಜಿ. ಹೆಗಡೆ, ಅಧೀಕ್ಷಕರು, ತಾಲ್ಲೂಕು ಪಂಚಾಯಿತಿ, ಬೆಳ್ತಂಗಡಿ, ಶ್ರೀ ಉಮೇಶ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಧರ್ಮಸ್ಥಳ ಗ್ರಾಮ ಪಂಚಾಯಿತಿ ಇವರುಗಳು ಹಾಜರಿದ್ದರು. ದಿನಾಂಕ:13.11.2018ರಂದು ಜರುಗಿದ ವಿಚಾರಣೆಯಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮಾದಾವರ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ ಅಧಿಕಾರಿಗಳು ಹಾಗೂ ಆಪಾದಿತ ಸದಸ್ಯರು ಹಾಜರಿರುತ್ತಾರೆ.

ವಿಚಾರಣೆ ಸಮಯದಲ್ಲಿ ಆಪಾದಿತ ಸದಸ್ಯರಾದ ಶ್ರೀಮತಿ ರವಿಜಾ ಎಸ್ ರಾವ್ ರವರು ತಮಗೆ ಆರೋಗ್ಯ ಸರಿ ಇಲ್ಲದ ಕಾರಣ ಗ್ರಾಮ ಪಂಚಾಯಿತಿ ದಿನಾಂಕ:24.09.2016, 25.10.2016 ಹಾಗೂ 18.11.2016ರಂದು ಗ್ರಾಮ ಪಂಚಾಯತ್ ಸಾಮಾನ್ಯ ಸಭೆಗಳಿಗೆ ಹಾಜರಾಗಲು ಸಾಧ್ಯವಾಗಲಿಲ್ಲ. ಈ ಬಗ್ಗೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರಿಗೆ ಮಾಹಿತಿ ನೀಡಿದ್ದಾಗಿ ತಿಳಿಸಿರುತ್ತಾರೆ. ತಮ್ಮ ಅನಾರೋಗ್ಯಕ್ಕೆ ಸಂಬಂಧಿಸಿದಂತೆ ವೈದ್ಯಕೀಯ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತಾರೆ ಹಾಗೂ ತಮ್ಮ ಸದಸ್ಯತ್ವವನ್ನು ಊರ್ಜಿತಗೊಳಿಸಿ, ತಮ್ಮ ಭಾಗದ ಜನರಿಗೆ ಸೇವೆ ಮಾಡುವ ಅವಕಾಶವನ್ನು ನೀಡುವಂತೆ ಮನವಿ ಮಾಡಿರುತ್ತಾರೆ.

ಈ ಪ್ರಕರಣದ ಮತ್ತೊಬ್ಬ ಆಪಾದಿತ ಸದಸ್ಯರಾದ ಶ್ರೀಮತಿ ಪುಷ್ಪಾರವರು ಸತತವಾಗಿ ನಾಲ್ಕು ಗ್ರಾಮ ಪಂಚಾಯತಿಯ ಸಭೆಗಳಿಗೆ ಗೈರುಹಾಜರಾದ ಆರೋಪಕ್ಕೆ ಸಂಬಂಧಿಸಿದಂತೆ, ಸರ್ಕಾರದಿಂದ ದಿನಾಂಕ:28.12.2017ರಂದು ಕಾರಣ ಕೇಳುವ ನೋಟೀಸನ್ನು ಜಾರಿಗೊಳಿಸಲಾಗಿತ್ತು. ಸದರಿ ನೋಟೀಸಿಗೆ ಶ್ರೀಮತಿ ಪುಷ್ಪಾರವರು ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸಿರುವುದಿಲ್ಲ. ತಮ್ಮ ಅಹವಾಲು ಹೇಳಿಕೊಳ್ಳಲು ಖುದ್ದು ವಿಚಾರಣೆಗೆ ಹಾಜರಾಗುವಂತೆ ದಿನಾಂಕ:04.12.2018ರಂದು ತಿಳುವಳಿಕೆ ಪತ್ರ ಜಾರಿ ಮಾಡಿದರೂ ಸಹ, ಶ್ರೀಮತಿ ಪುಷ್ಪಾರವರು ದಿನಾಂಕ:07.12.2018ರ ವಿಚಾರಣೆಗೆ ಗೈರು ಹಾಜರಾಗಿರುತ್ತಾರೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ಲಭ್ಯವಿರುವ ಎಲ್ಲಾ ಸಾಕ್ಷ್ಯಾಧಾರಗಳು, ದಾಖಲಾತಿಗಳನ್ನು ಪರಿಶೀಲಿಸಲಾಯಿತು. ಆಪಾದಿತ ಸದಸ್ಯರಾದ ಶ್ರೀಮತಿ ರವಿಜಾ ಎಸ್.ರಾವ್‌ರವರಿಗೆ ಇನ್ನು ಮುಂದೆ ಇಂತಹ ಪ್ರಕರಣಗಳು ಮರುಕಳಿಸದಂತೆ ಎಚ್ಚರಿಕೆ ನೀಡಿ, ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ 1993ರ ಪ್ರಕರಣ 43ಎ ರಡಿಯಲ್ಲಿ ಅನರ್ಹಗೊಳಿಸಲು ಪ್ರಾರಂಭಿಸಲಾದ ಕ್ರಮವನ್ನು ಕೈಬಿಡಲು ಸರ್ಕಾರವು ನಿರ್ಣಯಿಸಿದೆ.

ಶ್ರೀಮತಿ ಪುಷ್ಪಾರವರು ನಾಲ್ಕು ಗ್ರಾಮ ಪಂಚಾಯಿತಿ ಸಭೆಗಳಿಗೆ ಗೈರುಹಾಜರಾಗಿರುವುದು ಸಾಬೀತಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಕಲಂ 43(ಎ)(1)(iii)ರಡಿಯಲ್ಲಿ, ಶ್ರೀಮತಿ ಪುಷ್ಪಾ, ಸದಸ್ಯರು, ಧರ್ಮಸ್ಥಳ ಗ್ರಾಮ ಪಂಚಾಯಿತಿ ಇವರ ಸದಸ್ಯತ್ವವನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಆದೇಶ.

<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 793 ಗ್ರಾಪಂಅ 2017 ಬೆಂಗಳೂರು, ದಿನಾಂಕ:20-03-2019.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀಮತಿ ರವಿಜಾ ಎಸ್ ರಾವ್, ಸದಸ್ಯರು, ಧರ್ಮಸ್ಥಳ ಗ್ರಾಮ ಪಂಚಾಯಿತಿ, ಬೆಳ್ತಂಗಡಿ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ ಇವರಿಗೆ ಇನ್ನು ಮುಂದೆ ಇಂತಹ ಪ್ರಕರಣಗಳು ಮರುಕಳಿಸದಂತೆ ಎಚ್ಚರಿಕೆ ನೀಡಿದೆ ಹಾಗೂ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ 1993ರ ಕಲಂ 43(ಎ)(1)(iii)ರಡಿಯಲ್ಲಿ ಅನರ್ಹಗೊಳಿಸಲು ಪ್ರಾರಂಭಿಸಲಾದ ಕ್ರಮವನ್ನು ಕೈಬಿಟ್ಟು ಆದೇಶಿಸಿದೆ.

ಶ್ರೀಮತಿ ಪುಷ್ಪಾ, ಸದಸ್ಯರು, ಧರ್ಮಸ್ಥಳ ಗ್ರಾಮ ಪಂಚಾಯಿತಿ, ಬೆಳ್ತಂಗಡಿ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆರವರು ಸತತವಾಗಿ ನಾಲ್ಕು ಗ್ರಾಮ ಪಂಚಾಯಿತಿ ಸಭೆಗಳಿಗೆ ಗೈರು ಹಾಜರಾಗಿರುವುದು ಸಾಬೀತಾಗಿರುವ ಹಿನ್ನೆಲೆಯಲ್ಲಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಕಲಂ 43(ಎ)(1)(iii)ರಡಿಯಲ್ಲಿ ಶ್ರೀಮತಿ ಪುಷ್ಪಾ, ಸದಸ್ಯರು, ಧರ್ಮಸ್ಥಳ ಗ್ರಾಮ ಪಂಚಾಯಿತಿ, ಬೆಳ್ತಂಗಡಿ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ, ಇವರ ಸದಸ್ಯತ್ವವನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

20/3/19
(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

<u>ಪ್ರತಿ:</u>

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಕ್ಷಿಣ ಕನ್ನಡ ಜಿಲ್ಲೆ. ಮಂಗಳೂರು.
2) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬೆಳ್ತಂಗಡಿ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ.

3) ಶ್ರೀಮತಿ ರವಿಜಾ ಎಸ್ ರಾವ್, ಸದಸ್ಯರು, ಧರ್ಮಸ್ಥಳ ಗ್ರಾಮ ಪಂಚಾಯಿತಿ, ಬೆಳ್ತಂಗಡಿ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ.
4) ಶ್ರೀಮತಿ ಪುಷ್ಪಾ, ಸದಸ್ಯರು, ಧರ್ಮಸ್ಥಳ ಗ್ರಾಮ ಪಂಚಾಯಿತಿ, ಬೆಳ್ತಂಗಡಿ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಧರ್ಮಸ್ಥಳ ಗ್ರಾಮ ಪಂಚಾಯಿತಿ, ಬೆಳ್ತಂಗಡಿ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ.
6) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.
7) ಗಣಕ ಕೋಶ.

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.